(೯) **<u>ಲಿಖಿತ ಪರೀಕ್ಷೆ :-</u>**

1) **ಜೈಲರ್ ಹುದ್ದೆಗೆ** ಸಂಬಂಧಿಸಿದಂತೆ ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ 100 ಅಂಕಗಳಿಗೆ ವಸ್ತುನಿಷ್ಠ (ಆಬ್ಜೆಕ್ಟಿವ್) ಮಾದರಿಯ ಬಹುವಿಧ ಆಯ್ಕೆಯ ಪ್ರಶ್ನೆಗಳಿದ್ದು, ಇವು ಸಾಮಾನ್ಯ ಜ್ಞಾನ, ವಿಜ್ಞಾನ, ಭೂಗೋಳ, ಇತಿಹಾಸ, ಸಂವಿಧಾನ, ರಾಷ್ಟ್ರೀಯ ಸ್ವಾತಂತ್ರ್ಯ ಚಳುವಳಿ ಇತ್ಯಾದಿ ವಿಷಯಗಳಲ್ಲಿನ ಲಿಖಿತ ಪರೀಕ್ಷೆಯಾಗಿರುತ್ತದೆ. ಈ ಪರೀಕ್ಷೆಯ ಅವಧಿ ಒಂದೂವರೆ ಗಂಟೆಯದ್ದಾಗಿರುತ್ತದೆ.

2) **ವಾರ್ಡರ್ ಹುದ್ದೆಗೆ** ಸಂಬಂಧಿಸಿದಂತೆ ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ 100 ಅಂಕಗಳಿಗೆ ವಸ್ತುನಿಷ್ಠ (ಆಬ್ಜೆಕ್ಟಿವ್) ಮಾದರಿಯ ಬಹುವಿಧ ಆಯ್ಕೆಯ ಪ್ರಶ್ನೆಗಳಿದ್ದು, ಇವು ಸಾಮಾನ್ಯ ಜ್ಞಾನ, ವಿಜ್ಞಾನ, ಭೂಗೋಳ, ಇತಿಹಾಸ, ಸಂವಿಧಾನ, ರಾಷ್ಟ್ರೀಯ ಸ್ವಾತಂತ್ರ್ಯ ಚಳುವಳಿ ಇತ್ಯಾದಿ ವಿಷಯಗಳಲ್ಲಿನ ಲಿಖಿತ ಪರೀಕ್ಷೆಯಾಗಿರುತ್ತದೆ. ಈ ಪರೀಕ್ಷೆಯ ಅವಧಿ ಒಂದೂವರೆ ಗಂಟೆಯದ್ದಾಗಿರುತ್ತದೆ.

3) ಜೈಲರ್ ಮತ್ತು ವಾರ್ಡರ್ ಹುದ್ದೆಗೆ ಲಿಖಿತ ಪರೀಕ್ಷೆಗಳನ್ನು ಮುಂದೆ ಪ್ರಕಟಿಸುವ ದಿನಾಂಕಗಳಲ್ಲಿ ಆಯ್ಕೆ ಸಮಿತಿಯು ನಿಗದಿಪಡಿಸುವ ಕೇಂದ್ರಗಳಲ್ಲಿ ಮಾತ್ರ ನಡೆಸಲಾಗುವುದು. ಆಯ್ಕೆ ಸಮಿತಿಯು ಪರೀಕ್ಷಾ ಕೇಂದ್ರವನ್ನು ರದ್ದುಪಡಿಸುವ ಅಥವಾ ಹೊಸದಾಗಿ ಸೇರಿಸುವ ಹಕ್ಕನ್ನು ಕಾಯ್ದಿರಿಸಿಕೊಂಡಿರುತ್ತದೆ.

4) ಅಭ್ಯರ್ಥಿಗಳು ಲಿಖಿತ ಪರೀಕ್ಷೆಯ ದಿನಾಂಕ, ಸಮಯ ಮತ್ತು ಸ್ಥಳದ ಮಾಹಿತಿಯನ್ನು ಹೊಂದಿರುವ ಕರೆ ಪತ್ರವನ್ನು ಈ ಕಚೇರಿಯ ಅಧಿಕೃತ ವೆಬ್‌ಸೈಟ್ <u>www.karnatakaprisons.in</u> ನಿಂದ ಡೌನ್‌ಲೋಡ್ ಮಾಡಿಕೊಳ್ಳುವುದು.

5) **ಲಿಖಿತ ಪರೀಕ್ಷೆಗೆ ಹಾಜರಾಗುವಾಗ ಅಭ್ಯರ್ಥಿಗಳು i) ಕರೆಪತ್ರ ii) ಆನ್‌ಲೈನ್ ಅರ್ಜಿಯ ಹಾರ್ಡ್‌ಕಾಪಿ ಹಾಗೂ iii) ಹಣ ಪಾವತಿಸಿದ ಬಗ್ಗೆ ಬ್ಯಾಂಕ್ / ಅಂಚೆ ಕಛೇರಿಯ ಚಲನ್‌ಗಳನ್ನು ತರತಕ್ಕದ್ದು. ತಪ್ಪಿದಲ್ಲಿ ಲಿಖಿತ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡಲಾಗುವುದಿಲ್ಲ.**

6) ಲಿಖಿತ ಪರೀಕ್ಷೆಯ ಕರೆಪತ್ರವನ್ನು ಅಭ್ಯರ್ಥಿಗಳು ಈ ಇಲಾಖೆಯ ಅಧಿಕೃತ ವೆಬ್‌ಸೈಟ್ <u>www.karnatakaprisons.in</u> ನಿಂದ ಡೌನ್‌ಲೋಡ್ ಮಾಡಿಕೊಳ್ಳುವುದು. ಈ ಸಂಬಂಧ ಪರೀಕ್ಷೆಯ ದಿನಾಂಕ, ವೇಳೆ ಮತ್ತು ಸ್ಥಳಗಳನ್ನು ನಿಗದಿಪಡಿಸಿದ ತರುವಾಯ ಕರೆಪತ್ರಗಳನ್ನು ವೆಬ್‌ಸೈಟ್‌ನಲ್ಲಿ ಬಿಡುಗಡೆ ಮಾಡಲಾಗುವುದು ಮತ್ತು ಈ ಬಗ್ಗೆ ಮಾಧ್ಯಮಗಳ ಮೂಲಕ ಮತ್ತು ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು. ಲಿಖಿತ ಪರೀಕ್ಷೆಯು ನಡೆಯುವ ದಿನಾಂಕ, ವೇಳೆ ಮತ್ತು ಸ್ಥಳವನ್ನು ಮುಂದೆ ಸಂಬಂಧಪಟ್ಟ ಕೇಂದ್ರಗಳ ಸೂಚನಾ ಫಲಕದಲ್ಲಿಯೂ ಸಹ ಪ್ರಕಟಿಸಲಾಗುವುದು. ಈ ಸಂಬಂಧ ಅಭ್ಯರ್ಥಿಗಳು ಮುಖ್ಯವಾಗಿ ಈ ಕಛೇರಿಯ ಅಧಿಕೃತ ವೆಬ್‌ಸೈಟ್ <u>www.karnatakaprisons.in</u> ನ್ನು ದಿನನಿತ್ಯ ಮೇಲಿಂದ ಮೇಲೆ ಗಮನಿಸುತ್ತಿರುವುದು ಸೂಕ್ತ. ಕರೆಪತ್ರವನ್ನು ಪಡೆಯದೆ ಪರೀಕ್ಷೆಗೆ ಹಾಜರಾದಲ್ಲಿ ಅಂತಹವರಿಗೆ ಲಿಖಿತ ಪರೀಕ್ಷೆಗೆ ಅವಕಾಶ ನೀಡಲಾಗುವುದಿಲ್ಲ. ಅಭ್ಯರ್ಥಿಗಳು ಲಿಖಿತ ಪರೀಕ್ಷೆಗೆ ಬರುವಾಗ, ಕರೆಪತ್ರದ ಜೊತೆಗೆ ಈ ಕೆಳಕಂಡ ಯಾವುದಾದರೊಂದು ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು.

1) ಪಾಸ್‌ಪೋರ್ಟ್ (Passport)
2) ಚಾಲನಾ ಪರವಾನಗಿ ಪತ್ರ (Driving License)
3) ಪ್ಯಾನ್ ಕಾರ್ಡ್ (PAN Card)
4) ರಾಜ್ಯ ಸರ್ಕಾರ/ ಕೇಂದ್ರ ಸರ್ಕಾರ/ ಸಾರ್ವಜನಿಕ ಸ್ವಾಮ್ಯದ ಅಥವಾ ಸರ್ಕಾರದ ಅಧೀನಕ್ಕೊಳಪಟ್ಟ ಖಾಸಗೀ ಕಂಪನಿಗಳು ವಿತರಿಸಿರುವ ಭಾವಚಿತ್ರವಿರುವ ಸೇವಾ ಗುರುತಿನ ಚೀಟಿ (Service ID Card)

5) ಸಾರ್ವಜನಿಕ ಬ್ಯಾಂಕುಗಳು/ಅಂಚೆ ಕಛೇರಿಗಳು ವಿತರಿಸಿರುವ ಭಾವಚಿತ್ರವಿರುವ ಪಾಸ್ ಪುಸ್ತಕ (Bank Pass Book with Photograph)
6) ಭಾವಚಿತ್ರ ಸಮೇತ ನೋಂದಣಿಯಾಗಿರುವ ಸ್ವತ್ತಿನ ದಾಖಲೆಪತ್ರ ಅಥವಾ ಪಟ್ಟಾ ಪುಸ್ತಕ (Pattas and registered deeds with Photograph)
7) ಭಾವಚಿತ್ರ ಸಮೇತ ಸಂಬಂಧಪಟ್ಟ ಪ್ರಾಧಿಕಾರಿಯವರು ವಿತರಿಸಿರುವ ಜಾತಿ ಪ್ರಮಾಣ ಪತ್ರ (Caste Certificate with Photo)
8) ಮಾಜಿ ಸೈನಿಕ ಅಭ್ಯರ್ಥಿಗಳಿಗೆ ವಿತರಿಸಿರುವ ಪಿಂಚಣಿ ಪುಸ್ತಕ/ಪಿಂಚಣಿ ಮಂಜೂರಾತಿ ಆಗಿರುವ ಆದೇಶ (Ex-servicemen's pension book/pension payment order)
9) ಎನ್.ಆರ್.ಇ.ಜಿ.ಎಸ್.ಯಿಂದ ನೀಡಿದ ಭಾವಚಿತ್ರವಿರುವ ಉದ್ಯೋಗ ಚೀಟಿ. (Job cards with Photograph)
10) ಎಲೆಕ್ಟೋರಲ್ ಫೋಟೋ ಗುರುತಿನ ಚೀಟಿ (EPIC).
11) ಭಾರತೀಯ ಗುರುತು ಪ್ರಾಧಿಕಾರದಿಂದ ನೀಡಲಾಗಿರುವ ಆಧಾರ್ ಕಾರ್ಡ್. (AADHAR CARD).
12) ಅಭ್ಯರ್ಥಿಗಳು ಲಿಖಿತ ಪರೀಕ್ಷೆಗೆ ನಿಗದಿಪಡಿಸಿರುವ ಸಮಯಕ್ಕಿಂತ ಅರ್ಧಗಂಟೆ ಮುಂಚಿತವಾಗಿ ಪರೀಕ್ಷಾ ಕೇಂದ್ರದಲ್ಲಿ ಹಾಜರಿರತಕ್ಕದ್ದು.
13) ಪರೀಕ್ಷಾ ಕೇಂದ್ರದಲ್ಲಿ ಮೊಬೈಲ್ ಫೋನ್‌ಗಳು, ಪೇಜರ್, ಕ್ಯಾಲ್ಕ್ಯುಲೇಟರ್ ಇತ್ಯಾದಿ ಎಲೆಕ್ಟ್ರಾನಿಕ್ ಉಪಕರಣಗಳನ್ನು ಪರೀಕ್ಷಾ ಕೊಠಡಿಗೆ ತೆಗೆದುಕೊಂಡು ಬರುವುದನ್ನು ನಿಷೇಧಿಸಿದೆ.

**ಸೂಚನೆ**:-

i) ಅ) ಅಭ್ಯರ್ಥಿಗಳಿಗೆ ನೀಡಲಾಗುವ ಪ್ರಶ್ನೆ ಪತ್ರಿಕೆಯನ್ನು ಇಂಗ್ಲೀಷ್ ಮತ್ತು ಕನ್ನಡದಲ್ಲಿ ಮುದ್ರಿಸಲಾಗಿರುತ್ತದೆ.

ಆ) ಪ್ರಶ್ನೆ ಪತ್ರಿಕೆಯು ವಸ್ತುನಿಷ್ಠ (ಆಬ್ಜೆಕ್ಟೀವ್) ಮಾದರಿಯದಾಗಿದ್ದು, ಅಭ್ಯರ್ಥಿಯು ಸರಿಯಾದ ಉತ್ತರವನ್ನು ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿ ಗುರುತಿಸಬೇಕು.

ಇ) ಪ್ರಶ್ನೆ ಪತ್ರಿಕೆಯಲ್ಲಿನ ಪ್ರಶ್ನೆಗಳಿಗೆ ಉತ್ತರಗಳನ್ನು ಓ.ಎಂ.ಆರ್ ಶೀಟ್‌ನಲ್ಲಿ ಕಪ್ಪು/ನೀಲಿ ಬಣ್ಣದ ಬಾಲ್‌ಪಾಯಿಂಟ್ ಪೆನ್ನಿನಿಂದ ಮಾತ್ರ ಗುರುತಿಸಬೇಕಾಗುತ್ತದೆ. ಅಭ್ಯರ್ಥಿಯು ನಿಗದಿತ ಜಾಗದಲ್ಲಿ ಪ್ರಶ್ನೆ ಪತ್ರಿಕೆಯ ಶ್ರೇಣಿ (ಎ,ಬಿ,ಸಿ ಇತ್ಯಾದಿ) ಹಾಗೂ ಅರ್ಜಿ ಸಂಖ್ಯೆ ರೋಲ್ ನಂಬರ್ ಮತ್ತು ಸಹಿಯನ್ನು ತಪ್ಪದೇ ಭರ್ತಿ ಮಾಡಬೇಕು. ಇದನ್ನು ತುಂಬದಿದ್ದರೆ ಉತ್ತರಗಳನ್ನು ಮೌಲ್ಯಮಾಪನ ಮಾಡಲಾಗುವುದಿಲ್ಲ.

ಈ) ಅಭ್ಯರ್ಥಿಗಳು ಅರ್ಜಿ ಸಂಖ್ಯೆ. ರೋಲ್ ನಂಬರ್ ಇತ್ಯಾದಿ ಭರ್ತಿ ಮಾಡಿದ ನಂತರ ನಿಗದಿತ ಜಾಗದಲ್ಲಿ ತಪ್ಪದೇ ಸಹಿ ಮಾಡಬೇಕು ಮತ್ತು ಎಡಗೈ ಹೆಬ್ಬೆಟ್ಟಿನ ಗುರುತು ಹಾಕಬೇಕು.

ಉ) ಅರ್ಜಿ ಸಂಖ್ಯೆ, ರೋಲ್ ನಂಬರ್ ಇತ್ಯಾದಿಗಳನ್ನು ಭರ್ತಿ ಮಾಡದೇ ಪರೀಕ್ಷೆ ಮುಗಿದ ನಂತರ ಅದನ್ನು ಪರಿಗಣಿಸುವಂತೆ ಕೋರಿದಲ್ಲಿ, ಅಂತಹ ಮನವಿಗಳನ್ನು ಪರಿಗಣಿಸಲಾಗುವುದಿಲ್ಲ.

ii) ಅಭ್ಯರ್ಥಿಗಳು ಲಿಖಿತ ಪರೀಕ್ಷೆಗೆ ನಿಗದಿಪಡಿಸಿರುವ ಸಮಯಕ್ಕಿಂತ ಅರ್ಧ ಗಂಟೆ ಮುಂಚಿತವಾಗಿ ಪರೀಕ್ಷಾ ಕೊಠಡಿಯಲ್ಲಿ ಹಾಜರಿರತಕ್ಕದ್ದು, ಆ ಸಮಯದಲ್ಲಿ ಪರೀಕ್ಷಾ ಮೇಲ್ವಿಚಾರಕರು ಉತ್ತರ ಪತ್ರಿಕೆಯನ್ನು ಭರ್ತಿ ಮಾಡುವ ಬಗ್ಗೆ ಕೆಲವು ಮಾರ್ಗ ಸೂಚನೆಗಳನ್ನು ನೀಡುವರು.

iii) ನೇಮಕಾತಿ ಸಮಿತಿಯು ನಡೆಸುವ ಯಾವುದೇ ಪರೀಕ್ಷೆಗಳಲ್ಲಿ ಅನುಚಿತವಾಗಿ ವರ್ತಿಸಿದರೆ ಅಥವಾ ನಕಲು ಮಾಡಿದ್ದು ಕಂಡು ಬಂದರೆ ಅಥವಾ ನಕಲು ಮಾಡುವ ಸಾಮಗ್ರಿಯನ್ನು ಹೊಂದಿದ್ದರೆ,

ಅಂತಹ ಅಭ್ಯರ್ಥಿಗಳನ್ನು 3 ವರ್ಷಗಳ ಕಾಲ ಡಿಬಾರ್ ಮಾಡಲಾಗುವುದು ಮತ್ತು ಅವರ ಅಭ್ಯರ್ಥಿತನವನ್ನು ರದ್ದುಪಡಿಸಲಾಗುವುದು.

iv) ಪರೀಕ್ಷಾ ಕೇಂದ್ರದಲ್ಲಿ ಮೊಬೈಲ್ ಫೋನುಗಳನ್ನು ನಿಷೇಧಿಸಲಾಗಿದೆ. ಪರೀಕ್ಷೆ ಬರೆಯುವಾಗ ಮೊಬೈಲ್ ಫೋನುಗಳನ್ನು ಅಭ್ಯರ್ಥಿಗಳು ಹೊಂದಿದ್ದರೆ ಅವರನ್ನು ಅನರ್ಹಗೊಳಸಲಾಗುತ್ತದೆ.

v) ಎಲೆಕ್ಟ್ರಾನಿಕ್ ಸಾಮಗ್ರಿಗಳಾದ ಪೇಜರ್, ಕ್ಯಾಲ್ಕುಲೇಟರ್ ಇತ್ಯಾದಿಗಳನ್ನು ಪರೀಕ್ಷಾ ಕೊಠಡಿಗೆ ತೆಗೆದುಕೊಂಡು ಹೋಗುವುದನ್ನು ನಿಷೇದಿಸಲಾಗಿದೆ.

vi) ಪ್ರಶ್ನೆ ಪತ್ರಿಕೆಯಲ್ಲಿನ ಯಾವುದಾದರು ಪ್ರಶ್ನೆಯ ಬಗ್ಗೆ ಆಕ್ಷೇಪಣೆ ಇದ್ದಲ್ಲಿ. ಪರೀಕ್ಷಾ ಕೇಂದ್ರವನ್ನು ಬಿಡುವ ಮೊದಲು ಆಯಾ ಪರೀಕ್ಷಾ ದಿನವೇ ಸಂಬಂಧಿತ ಪರೀಕ್ಷಾ ಮೇಲ್ವಿಚಾರಕರ ಮುಖಾಂತರ ಅಭ್ಯರ್ಥಿಯ ಹೆಸರು, ವಿಳಾಸ, ನೋಂದಣಿ ಸಂಖ್ಯೆ. ಇತ್ಯಾದಿಗಳನ್ನು ನಮೂದಿಸಿರುವ ಲಿಖಿತ ಮನವಿಯನ್ನು ಪರೀಕ್ಷಾ ಮೇಲ್ವಿಚಾರಕರಿಗೆ ಸಲ್ಲಿಸಿ ಸ್ವೀಕೃತಿ (Acknowledgement) ಪಡೆಯಬೇಕು. ಪರೀಕ್ಷಾ ಕೇಂದ್ರ ಬಿಟ್ಟ ನಂತರ ಕಳುಹಿಸುವ ಯಾವುದೇ ಆಕ್ಷೇಪಣೆಯನ್ನು ಮಾನ್ಯ ಮಾಡಲಾಗುವುದಿಲ್ಲ. ಪ್ರಶ್ನೆ ಪತ್ರಿಕೆಯಲ್ಲಿ ಯಾವುದೇ ದೋಷ ಕಂಡುಬಂದಲ್ಲಿ ಅದನ್ನು ತಕ್ಷಣ ಮೇಲ್ವಿಚಾರಕರ ಗಮನಕ್ಕೆ ತಂದು ಅದನ್ನು ಸರಿಪಡಿಸಿಕೊಳ್ಳಬೇಕು. ಪರೀಕ್ಷೆ ಮುಗಿದ ನಂತರ ಅದರ ಬಗ್ಗೆ ನೇಮಕಾತಿ ಸಮಿತಿಯ ಗಮನಕ್ಕೆ ತಂದರೆ ಅಂತಹ ಆಕ್ಷೇಪಣೆಗಳನ್ನು ಗಣನೆಗೆ ತೆಗೆದುಕೊಳ್ಳುವುದಿಲ್ಲ.

(10) ಅಭ್ಯರ್ಥಿಗಳು ಲಿಖಿತ ಪರೀಕ್ಷೆಯಲ್ಲಿ ಪಡೆದ ಅಂಕಗಳನ್ನು ಮತ್ತು ಅವರು ಅರ್ಹತಾ (qualifying) ಪರೀಕ್ಷೆಯಲ್ಲಿ ಪಡೆದ ಶೇಕಡಾವಾರು ಅಂಕಗಳನ್ನೂ ಕೂಡಿ ಅದರ ಆಧಾರದ ಮೇಲೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು / ಅರ್ಹತಾ ಪಟ್ಟಿಯನ್ನು ತಯಾರಿಸಲಾಗುವುದು. ಈ ಅರ್ಹ ಅಭ್ಯರ್ಥಿಗಳ ಪಟ್ಟಿಯಿಂದ / ಅರ್ಹತಾ ಪಟ್ಟಿಯಿಂದ ಪತಿ ವರ್ಗದಲ್ಲಿ **1:5 ರ** ಪ್ರಮಾಣದಲ್ಲಿ ದೇಹದಾರ್ಢ್ಯತೆ ಹಾಗೂ ದೈಹಿಕ ಸಾಮರ್ಥ್ಯ ಪರೀಕ್ಷೆಗೆ ಅಭ್ಯರ್ಥಿಗಳನ್ನು ಕರೆಯಲಾಗುವುದು.